# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಸರ್ಕಾರಿ ಅಂಧ ನೌಕರರ ಸಂಘ(ರಿ) ಕ್ಕೆ ಮಾನ್ಯತೆ ನೀಡುವ ಬಗ್ಗೆ.

**ಓದಲಾಗಿದೆ:** 1. ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ಪತ್ರ ಸಂಖ್ಯೆ:ವಿಹಿನಿ/ಸಿ4/03/ಸಂಘ ಸಂಸ್ಥೆ ಬೇಡಿಕೆ/2021-22/1347, ದಿನಾಂಕ: 02.01.2021
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 6 ಸೇಸವಿ 2013, ಬೆಂಗಳೂರು, ದಿನಾಂಕ: 22.01.2016

**ಪ್ರಸ್ತಾವನೆ:**

ಕರ್ನಾಟಕ ರಾಜ್ಯ ಸರ್ಕಾರಿ ಅಂಧ ನೌಕರರ ಸಂಘ(ರಿ) ರವರು ಅಧಿಕೃತವಾಗಿ ರಾಜ್ಯ ಸರ್ಕಾರಿ ಅಂಧ ನೌಕರರ ಸಂಘಟನೆ ಎಂದು ಮಾನ್ಯತೆ ನೀಡಲು ಕೋರಿದ್ದು, ಈಗಾಗಲೇ ಸಂಘಗಳ ಜಿಲ್ಲಾ ನೋಂದಣಾಧಿಕಾರಿಗಳಿಂದ ನೋಂದಣಿಯಾಗಿರುವ ಸಂಸ್ಥೆಯಾಗಿದ್ದು, Karnataka Civil Services ( Recognition of Service Association) Rules, 2015 ರ ನಿಯಮ 8(1) ರಲ್ಲಿ ತಿಳಿಸಿರುವಂತೆ ಸೇವಾ ಸಂಘಗಳು ಮಾನ್ಯತೆ ಕೋರಿದ ಸಂದರ್ಭದಲ್ಲಿ ಸಂಘದ ಸದಸ್ಯರ ಪಟ್ಟಿಯನ್ನು ಅವರ ಎಂಪ್ಲಾಯಿ ಸಂಖ್ಯೆಯೊಂದಿಗೆ ಪಡೆದು ಒದಗಿಸಿರುವ ಪಟ್ಟಿಯನ್ನು HRMS ನಲ್ಲಿ ದಾಖಲಾಗಿರುವ ಆ ವೃಂದದ ನೌಕರರ ಸಂಖ್ಯೆ, ಹೆಸರು, ಎಂಪ್ಲಾಯಿ ಸಂಖ್ಯೆಯೊಂದಿಗೆ ಪರಿಶೀಲಿಸಿ ಮಾನ್ಯತೆ ನೀಡಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿರುತ್ತದೆ. ಅದರಂತೆ ಅಂಧ ಸರ್ಕಾರಿ ನೌಕರರ 570 ಸದಸ್ಯರಲ್ಲಿ 24 ನೌಕರರನ್ನು ಹೊರತು ಪಡಿಸಿ ಉಳಿದ 546 ನೌಕರರ ಪಟ್ಟಿಯ HRMS ಡಾಟಾಬೇಸ್‌ನೊಂದಿಗೆ ಹೊಂದಾಣಿಕೆಯಾಗಿರುವುದಾಗಿಯೂ ಹಾಗೂ ಕರ್ನಾಟಕ ಸರ್ಕಾರಿ ವಿಮಾ ಇಲಾಖೆ ಬೆಂಗಳುರು ರವರು ಸಹ ಸಹಮತಿ ನೀಡಿರುತ್ತಾರೆ

ಉಲ್ಲೇಖ (2) ರ ಸರ್ಕಾರ ಆದೇಶ ಸರ್ಕಾರದ ಅಧಿಸೂಚನೆ ದಿನಾಂಕ: 04.01.2016 ರಲ್ಲಿ ತಿಳಿಸಿರುವಂತೆ ದಾಖಲೆಗಳನ್ನು ಸಲ್ಲಿಸಿದ್ದು, ಯೋಜನಾ ನಿರ್ದೇಶಕರು, HRMS ಹಾಗೂ ಕರ್ನಾಟಕ ಸರ್ಕಾರಿ ವಿಮಾ ಇಲಾಖೆ ರವರು ಸಹಮತಿ ನೀಡಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಅಂಧ ನೌಕರರ ಸಂಘ(ರಿ)ಕ್ಕೆ ಮಾನ್ಯತೆ ನೀಡುವಂತೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ರವರು ಮೇಲೆ ಓದಲಾದ ಉಲ್ಲೇಖ (1) ರ ಪತ್ರದಲ್ಲಿ ಕೋರಿರುತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಮಮಇ 50 ಪಿಹೆಚ್ ಪಿ 2019, ಬೆಂಗಳೂರು, ದಿ:06.12.2021**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಅಂಧ ನೌಕರರ ಸಂಘ (ರಿ)ಕ್ಕೆ ಕರ್ನಾಟಕ ಸಿವಿಲ್ ಸೇವಾ(ಸೇವಾ ಸಂಘಗಳ ಮಾನ್ಯತೆ) ನಿಯಮ 2015 ಅಧಿಸೂಚನೆ ಸಂಖ್ಯೆ:ಡಿಪಿಎಆರ್ 6 ಎಸ್ ಬಿಎಂ 2013, ದಿನಾಂಕ:04.01.2016ರನ್ವಯ ಸರ್ಕಾರವು ಅಧಿಕೃತವಾಗಿ ಮಾನ್ಯತೆ ನೀಡಿದೆ.

ಈ ಸಂಘವು ಕರ್ನಾಟಕ ಸಿವಿಲ್ (ಸೇವಾ ಸಂಘಗಳ ಮಾನ್ಯತೆ) ನಿಯಮಗಳು, 2015 ರನ್ವಯ ನಿರ್ದಿಷ್ಟಪಡಿಸಿರುವ ಎಲ್ಲಾ ಷರತ್ತುಗಳನ್ನು ಪಾಲಿಸತಕ್ಕದ್ದು ಈ ನಿಯಮಗಳಲ್ಲಿನ ಯಾವುದೇ

ಷರತ್ತುಗಳನ್ನು ಸದರಿ ಸಂಘವು ಉಲ್ಲಂಘಿಸುತ್ತಿದೆ ಎಂದು ಸರ್ಕಾರಕ್ಕೆ ಮನವರಿಕೆಯಾದಲ್ಲಿ ಸರ್ಕಾರವು ನೀಡಿರುವ ಮಾನ್ಯತೆಯನ್ನು ಯಾವುದೇ ಕ್ಷಣದಲ್ಲಿ ರದ್ದುಗೊಳಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

06/12/2021

(ಜಿ. ಹೆಚ್. ಸರೋಜಮ್ಮ)
ಸರ್ಕಾರ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

**ಪ್ರತಿಗಳು:**

1. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ, ವಿ.ವಿ.ಗೋಪುರ, ಪೋಡಿಯಂ ಬ್ಲಾಕ್, ಡಾ|| ಅಂಬೇಡ್ಕರ್ ವೀದಿ, ಬೆಂಗಳೂರು-01.
2. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು-2)
3. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸರ್ಕಾರಿ ಅಂಧ ನೌಕರರ ಸಂಘ(ರಿ) # 41/b, 3ನೇ ಅಡ್ಡ ರಸ್ತೆ, ರೈನ್ಬೋ ಲೇಔಟ್, ವಡೇರಹಳ್ಳಿ, ವಿದ್ಯಾರಣ್ಯಪುರ ಅಂಚೆ, ಬೆಂಗಳೂರು, ಉತ್ತರ, ಬೆಂಗಳೂರು ನಗರ-560097.
4. ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಅಪರ ಕಾರ್ಯದರ್ಶಿರವರ ಆಪ್ತ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
7. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಓ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.